(ಕಂದಾಯ ಇಲಾಖೆ)

# ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಲಯ, ದಕ್ಷಿಣ ಕನ್ನಡ ಜಿಲ್ಲೆ.

**DEPUTY COMMISSIONER & DISTRICT MAGISTRATE'S OFFICE, DAKSHINA KANNADA DISTRICT.**

**Old Port Road, MANGALURU- 575001 ಹಳೇ ಬಂದರು ರಸ್ತೆ, ಮಂಗಳೂರು – 575001**

**Phone: 0824-2220584, 2220590 Fax: 0824-2441564, Email:dc.mnglr@gmail.com Website:www.dk.nic.in**

ಸಂ:ಸಿಎಎಲ್.ಸಿಆರ್: 30/2024/ಸಿ1 ದಿನಾಂಕ: 15-07-2024

## ಪ್ರಕಟಣೆ

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವ್ಯಾಪಕವಾಗಿ ಮಳೆಯಾಗುತ್ತಿದ್ದು, ಭಾರತೀಯ ಹವಾಮಾನ ಇಲಾಖೆ ಮತ್ತು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮುನ್ಸೂಚನೆಯಂತೆ, ದಿನಾಂಕ 16-07-2024 ರಂದು ರೆಡ್ ಅಲರ್ಟ್ ಘೋಷಣೆಯಾಗಿರುವ ಹಿನ್ನಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ದಕ್ಷಿಣ ಕನ್ನಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಈ ಕೆಳಗಿನಂತೆ ತುರ್ತು ಕ್ರಮಗಳನ್ನು ಕೈಗೊಂಡಿರುತ್ತದೆ.

1) ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ಅಂಗನವಾಡಿ, ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪ್ರಾಥಮಿಕ & ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು, (12ನೇ ತರಗತಿವರೆಗೆ) ದಿನಾಂಕ: 16-07-2024 ರಂದು ರಜೆಯನ್ನು ಘೋಷಿಸಲಾಗಿದೆ.
2) ವಿದ್ಯಾರ್ಥಿಗಳ ಹಾಜರಾತಿಯನ್ನು ಕಡ್ಡಾಯ ಮಾಡುವಂತಿಲ್ಲ.
3) ದುರ್ಬಲ / ಶಿಥಿಲ ಕಟ್ಟಡಗಳು ಇದ್ದಲ್ಲಿ ಅಂತಹ ಕಟ್ಟಡಗಳನ್ನು ಪಾಠ ಪ್ರವಚನಗಳಿಗೆ ಬಳಸುವಂತಿಲ್ಲ. ಈ ನಿಟ್ಟಿನಲ್ಲಿ ಶಾಲಾ ಕಾಲೇಜುಗಳ ಮುಖ್ಯಸ್ಥರು ಕಟ್ಟಡಗಳ ಸುಸ್ಥಿತಿಯ ಬಗ್ಗೆ ಗಮನಹರಿಸುವುದು.
4) ನೀರು ಇರುವ ತಗ್ಗು ಪ್ರದೇಶ, ಕೆರೆ, ನದಿ ತೀರ ಸಮುದ್ರ ತೀರಕ್ಕೆ ಸಾರ್ವಜನಿಕರು/ಪ್ರವಾಸಿಗರು ತೆರಳದಂತೆ ಜಾಗ್ರತೆ ವಹಿಸುವುದು.
5) ಮೀನುಗಾರರು ಸಮುದ್ರಕ್ಕೆ ಮೀನುಗಾರಿಕೆಗೆ ತೆರಳದಂತೆ ಸೂಚನೆ ನೀಡಲಾಗಿದೆ.
6) ಜಿಲ್ಲೆಯಲ್ಲಿ ವಿಪರೀತ ಮಳೆ ಸುರಿಯುತ್ತಿರುವುದರಿಂದ ಸಾರ್ವಜನಿಕರು ನದಿಗಳ/ತೋಡುಗಳ ಮತ್ತು ವಿದ್ಯುತ್ ಕಂಬ/ತಂತಿ ಸಮೀಪ ಹೋಗದಂತೆ ಎಚ್ಚರಿಕೆ ವಹಿಸುವುದು.
7) ಸಂಭಾವ್ಯ ಹಾನಿಯನ್ನು ತಡೆಗಟ್ಟುವ ಹಿನ್ನಲೆಯಲ್ಲಿ ಸಾರ್ವಜನಿಕರು ಅಪಾಯಕಾರಿ ಸನ್ನಿವೇಶಗಳಿಂದ ದೂರವಿದ್ದು, ಜಿಲ್ಲಾಡಳಿತದ ಸಲಹೆ/ಸೂಚನೆಗಳನ್ನು ಪಾಲಿಸುವುದು.
8) ಪ್ರಾಕೃತಿಕ ವಿಕೋಪದಿಂದ ಯಾವುದೇ ರೀತಿಯ ಘಟನೆಗಳು ಸಂಭವಿಸಿದಲ್ಲಿ ಅಥವಾ ಸಂಭವಿಸಬಹುದಾದ ಸೂಚನೆ ಇದ್ದಲ್ಲಿ ಸಾರ್ವಜನಿಕರು ಕೂಡಲೇ ಸಂಬಂಧಪಟ್ಟ ಪಂಚಾಯತ್/ನಗರ ಸ್ಥಳೀಯ ಸಂಸ್ಥೆಗಳಿಗೆ ಮಾಹಿತಿಯನ್ನು ನೀಡುವುದು.

ಪ್ರಾಕೃತಿಕ ವಿಕೋಪ ಸಂಬಂಧಿಸಿದ ಯಾವುದೇ ಸಮಸ್ಯೆಗಳಿಗೆ ಈ ಕೆಳಕಂಡ ದೂರವಾಣಿಯನ್ನು ಸಂಪರ್ಕಿಸುವುದು.

| |
|---|
| ತುರ್ತು ಸೇವೆಗೆ ಟೋಲ್ ಫ್ರೀ ಸಂ. |
| 24*7 ಕಂಟ್ರೋಲ್ ರೂಂ – 1077 / |
| 0824-2442590 |

ಜಿಲ್ಲಾಧಿಕಾರಿ
ಹಾಗೂ ಅಧ್ಯಕ್ಷರು
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

ಪ್ರತಿ: ಜಿಲ್ಲಾ ವಾರ್ತಾಧಿಕಾರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು- ಸುದ್ದಿ ಮಾಧ್ಯಮದ ಮೂಲಕ ಸಾರ್ವಜನಿಕ ಪ್ರಕಟಣೆಗಾಗಿ ಸೂಕ್ತ ಕ್ರಮವಹಿಸುವುದು